ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಮಂಗಳವಾರ, ದಿನಾಂಕ : 23ನೇ ಜುಲೈ, 2019

ಹೆಚ್ಚಿನ ಜನಸಂಖ್ಯೆ ಹಾಗೂ ವಿಸ್ತೀರ್ಣಗಳ್ಳುಳ್ಳ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸುವ ಬಗ್ಗೆ

ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ):-

528 (515) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹೆಚ್ಚಿನ ಜನಸಂಖ್ಯೆ ಹಾಗೂ ವಿಸ್ತೀರ್ಣಗಳ್ಳುಳ್ಳ ಗ್ರಾಮ ಪಂಚಾಯಿತಿಗಳನ್ನು ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೆ ಏರಿಸಲು ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಆ) ಶಿವಮೊಗ್ಗ ಜಿಲ್ಲೆಯ ಹಲವಾರು ಗ್ರಾಮ ಪಂಚಾಯಿತಿಗಳು ಹೆಚ್ಚಿನ ಜನಸಂಖ್ಯೆ ಹೊಂದಿದ್ದು, ವಿಸ್ತೀರ್ಣವು ಹೆಚ್ಚಿದ್ದು, (ಉದಾಹರಣೆಗೆ ಭದ್ರಾವತಿ ತಾಲ್ಲೂಕಿನ ಹೊಳೆಹೊನ್ನೂರು ಗ್ರಾಮ ಪಂಚಾಯಿತಿ ಹೊಸನಗರ ತಾಲ್ಲೂಕಿನ ರಿಪ್ಪನ್‌ಪೇಟೆ ಗ್ರಾಮ ಪಂಚಾಯಿತಿಗಳಾಗಿ ಸೊರಬ ತಾಲ್ಲೂಕಿನ ಆನವಟ್ಟಿ ಗ್ರಾಮ ಪಂಚಾಯಿತಿ) ಇವುಗಳನ್ನು ಪಟ್ಟಣ ಪಂಚಾಯಿತಿಗಳಾಗಿ ಮೇಲ್ದರ್ಜೆಗೆ ಏರಿಸಿ ಅಲ್ಲಿನ ನಾಗರೀಕರಿಗೆ ಹೆಚ್ಚಿನ ಸೌಲಭ್ಯ ಕೊಡುವ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳುತ್ತಿದೆಯೇ ;

(ಇ) ಇದೇ ರೀತಿ ರಾಜ್ಯದ ಹಲವಾರು ಗ್ರಾಮ ಪಂಚಾಯಿತಿಗಳು ಪಟ್ಟಣ ಪಂಚಾಯಿತಿಯಾಗಿ ಪರಿವರ್ತನೆಯಾಗಲು ಎಲ್ಲಾ ಸೌಲಭ್ಯಗಳನ್ನು ಹೊಂದಿರುವುದರಿಂದ ಸರ್ಕಾರ ಈ ಬಗ್ಗೆ ಗಮನ ಹರಿಸಿ ಹೆಚ್ಚಿನ ಅನುದಾನವನ್ನು ನಿಗದಿ ಮಾಡಿ ಈ ಬಗ್ಗೆ ಸೂಕ್ತ ನಿರ್ಧಾರ ಕೈಗೊಳ್ಳುವುದೇ ? (ವಿವರವಾದ ಮಾಹಿತಿ ನೀಡುವುದು)